## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 487 |
| ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 10-07-2023 |
| ಉತ್ತರಿಸುವವರು | : | ಮಾನ್ಯ ಅರಣ್ಯ, ಜೀವಶಾಸ್ತ್ರ ಮತ್ತು ಪರಿಸರ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಐದು ವರ್ಷಗಳ ಅವಧಿಯಲ್ಲಿ ರಾಜ್ಯದಲ್ಲಿ ಅರಣ್ಯ ಜೀವಿಶಾಸ್ತ್ರ ವ್ಯವಸ್ಥೆಯ ಮೇಲೆ ಪ್ರಾಕೃತಿಕ ಮತ್ತು ಮಾನವ ನಿರ್ಮಿತ ಒತ್ತಡಗಳಿಂದ ಉಂಟಾದ ದುಷ್ಪರಿಣಾಮಗಳನ್ನು ಸರಿದೂಗಿಸುವ ಉದ್ದೇಶಕ್ಕಾಗಿ ಹಸಿರು ಆಯವ್ಯಯವನ್ನು ರೂಪಿಸಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ ಸರ್ಕಾರದ ಗಮನದಲ್ಲಿದೆಯೇ; | ಕಳೆದ ಐದು ವರ್ಷಗಳ ಅವಧಿಯಲ್ಲಿ ರಾಜ್ಯದಲ್ಲಿ ಅರಣ್ಯ ಜೀವಿಶಾಸ್ತ್ರ ವ್ಯವಸ್ಥೆಯ ಮೇಲೆ ಪ್ರಾಕೃತಿಕ ಮತ್ತು ಮಾನವ ನಿರ್ಮಿತ ಒತ್ತಡಗಳಿಂದ ಉಂಟಾದ ದುಷ್ಪರಿಣಾಮಗಳನ್ನು ಸರಿದೂಗಿಸುವ ಉದ್ದೇಶಕ್ಕಾಗಿ ಸರ್ಕಾರದ ಆದೇಶ ಸಂಖ್ಯೆ: ಅಪಜೀ 39 ಎಫ್‌ಎಪಿ 2022, ದಿನಾಂಕ: 05-08-2022 ರಲ್ಲಿ **"ಹಸಿರು ಆಯವ್ಯಯ"** ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ರೂ.100.00 ಕೋಟಿ ಅನುದಾನವನ್ನು ನಿಗದಿಪಡಿಸಲಾಗಿರುತ್ತದೆ.<br><br>2022-23ನೇ ಸಾಲಿನಲ್ಲಿ ರೂ.50.00 ಕೋಟಿ ಅನುದಾನವನ್ನು ಉಪಯೋಗಿಸಿಕೊಂಡು ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಕ್ರಮಕೈಗೊಳ್ಳಲಾಗಿರುತ್ತದೆ. |
| ಆ) | ಹಾಗಿದ್ದಲ್ಲಿ, ಈ ಯೋಜನೆಯಡಿ ಇದುವರೆವಿಗೂ ಎಷ್ಟು ಅರಣ್ಯ ಜೀವಿಶಾಸ್ತ್ರ ವ್ಯವಸ್ಥೆಯ ಮೇಲೆ ಪ್ರಾಕೃತಿಕ ಮತ್ತು ಮಾನವ ನಿರ್ಮಿತ ಒತ್ತಡಗಳಿಂದ ಉಂಟಾದ ದುಷ್ಪರಿಣಾಮಗಳನ್ನು ಸರಿಪಡಿಸಲಾಗಿದೆಯೇ; (ವಿವರ ನೀಡುವುದು) | ಅರಣ್ಯ ಜೀವಿಶಾಸ್ತ್ರ ವ್ಯವಸ್ಥೆಯ ಮೇಲೆ ಪ್ರಾಕೃತಿಕ ಮತ್ತು ಮಾನವ ನಿರ್ಮಿತ ಒತ್ತಡಗಳಿಂದ ಉಂಟಾದ ದುಷ್ಪರಿಣಾಮಗಳನ್ನು ತಗ್ಗಿಸುವ ವಿಷಯವು ಕ್ಲಿಷ್ಟಕರ ಮತ್ತು ದೀರ್ಘಕಾಲದ ಪ್ರಕ್ರಿಯೆಯಾಗಿದ್ದು, ಇದರಲ್ಲಿ ಭೂಮಿಯ ಇಂಗಾಲದ ಪ್ರಮಾಣದ ಪುನಶ್ಚೇತನ ಮಣ್ಣು ಸವಳಿಕೆ ತಡೆಗಟ್ಟುವುದು ಇತ್ಯಾದಿಗಳನ್ನು ಹಸಿರೀಕರಣದ ಮುಖೇನ ಸಾಧಿಸುವ ನಿಟ್ಟಿನಲ್ಲಿ ಪ್ರಾರಂಭಿಕವಾಗಿ 2022-23ನೇ ಸಾಲಿನಲ್ಲಿ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ. ವಿವಿರ ಕೆಳಕಂಡಂತಿದೆ:- |

| ಕ್ರ. ಸಂ. | ಕಾಮಗಾರಿಯ ವಿವರ | ಸಾಧಿಸಿದ ಭೌತಿಕ ಗುರಿ (ಹೆಕ್ಟೇರ್ ಗಳಲ್ಲಿ) |
|---|---|---|
| 1 | ಬೋಳುಗುಡ್ಡ ಪ್ರದೇಶದಲ್ಲಿ ನೆಡುತೋಪು ನಿರ್ಮಾಣ | 4,535.52 |
| 2 | ರಕ್ಷಣಾ ಕಾಮಗಾರಿ | 2526.01 |
| 3 | ಮ್ಯಾಂಗ್ರೂವ್ ನೆಡುತೋಪು ನಿರ್ಮಾಣ | 510.00 |
| 4 | ಶೆಲ್ಟರ್ ಬೆಲ್ಟ್ ಮಾನ್ಸೂನ್ ನೆಡುತೋಪು ನಿರ್ಮಾಣ | 105.00 |
| | ಶೆಲ್ಟರ್ ಬೆಲ್ಟ್ ಮುಂಗಡ ಕಾಮಗಾರಿ | 532.00 |
| 5 | ಜಲಾನಯನ ಪ್ರದೇಶದಲ್ಲಿ ಮುಂಗಡ ಕಾಮಗಾರಿ (ಕಿ.ಮೀ.) | 332.95 |
| | ಜಲಾನಯನ ಪ್ರದೇಶದಲ್ಲಿ ಮಾನ್ಸೂನ್ ನೆಡುತೋಪು ನಿರ್ಮಾಣ | 265.00 |
| 6 | ಭೂಕುಸಿತ ಪೀಡಿತ ಪ್ರದೇಶಗಳಲ್ಲಿ ಮಾನ್ಸೂನ್ ನೆಡುತೋಪು ನಿರ್ಮಾಣ | 82.00 |
| 7 | ಸಾರ್ವಜನಿಕ ವಿತರಣೆಗಾಗಿ ಸಸಿಗಳನ್ನು ಬೆಳೆಸುವುದು. | 36.91 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ವನ್ಯಜೀವಿ ಸಂರಕ್ಷಣೆ ಅಧಿನಿಯಮ-1972 ರಡಿಯಲ್ಲಿ ಅಧಿಸೂಚಿಸಿರುವ ಸಂರಕ್ಷಣಾ ಮೀಸಲು ಪ್ರದೇಶಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ ಕಳೆದ ಮೂರು ವರ್ಷಗಳಲ್ಲಿ ಒದಗಿಸಲಾದ ಅನುದಾನವೆಷ್ಟು ಮತ್ತು ಇದರಲ್ಲಿ ಖರ್ಚುಮಾಡಿರುವ ಹಣವೆಷ್ಟು? | ವನ್ಯಜೀವಿ (ಸಂರಕ್ಷಣಾ) ಅಧಿನಿಯಮ, 1972 ರಡಿಯಲ್ಲಿ ಅಧಿಸೂಚಿಸಿರುವ ಸಂರಕ್ಷಣಾ ಮೀಸಲು ಪ್ರದೇಶಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ ಕಳೆದ ಮೂರು ವರ್ಷಗಳಲ್ಲಿ ಒದಗಿಸಲಾದ ಅನುದಾನ ಮತ್ತು ವೆಚ್ಚದ ವಿವರ ಈ ಕೆಳಕಂಡಂತಿದೆ:- (ರೂ.ಲಕ್ಷಗಳಲ್ಲಿ) |

(ರೂ.ಲಕ್ಷಗಳಲ್ಲಿ)

| ವರ್ಷ | ಅನುದಾನ | ವೆಚ್ಚ |
|---|---|---|
| 2020-21 | 129.91 | 129.91 |
| 2021-22 | 205.056 | 205.056 |
| 2022-23 | 514.38 | 514.38 |

**ಸಂಖ್ಯೆ: ಅಪಜೀ 77 ಎಫ್‌ಎಪಿ 2023**

**(ಈಶ್ವರ ಬಿ. ಖಂಡ್ರೆ)**
ಅರಣ್ಯ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು